## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2018-19ನೇ ಶೈಕ್ಷಣಿಕ ಸಾಲಿಗೆ ಇಂಜನೀಯರಿಂಗ್ / ಆರ್ಕಿಟೆಕ್ಚರ್ ಕೋರ್ಸುಗಳಿಗೆ ಸಂಬಂಧಿಸಿದಂತೆ ಖಾಸಗೀ / ಡೀಮ್ಡ್ ವಿಶ್ವವಿದ್ಯಾಲಯಗಳ ಸರ್ಕಾರಿ ಕೋಟಾದ ಸೀಟುಗಳಿಗೆ ಶುಲ್ಕ ನಿಗಧಿಪಡಿಸುವ ಕುರಿತು.

**ಓ ದ ಲಾ ಗಿ ದೆ:-**

1) ಸರ್ಕಾರದ ಪತ್ರ ಸಂಖ್ಯೆ: ಇಡಿ 73 ಟಿಇಸಿ 2015 (ಭಾಗ), ದಿನಾಂಕ:25.06.2015
2) ಸರ್ಕಾರದ ಆದೇಶ ಸಂಖ್ಯೆ: ಇಡಿ 157 ಟಿಇಸಿ 2018, ದಿನಾಂಕ: 28.06.2018
3) ಸರ್ಕಾರದ ಆದೇಶ ಸಂಖ್ಯೆ: ಇಡಿ 157 ಟಿಇಸಿ 2018 (ಭಾಗ), ದಿನಾಂಕ: 11.07.2018
4) ಖಾಸಗಿ ವಿಶ್ವವಿದ್ಯಾಲಯಗಳು ಶುಲ್ಕ ಹೆಚ್ಚಿಸುವಂತೆ ಕೋರಿ ಸಲ್ಲಿಸಿರುವ ಮನವಿಗಳು.

**ಪ್ರ ಸ್ತಾ ವ ನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ, ಖಾಸಗೀ / ಡೀಮ್ಡ್ ವಿಶ್ವವಿದ್ಯಾಲಯಗಳಲ್ಲಿ ನಡೆಸುವ ತಾಂತ್ರಿಕ ಕೋರ್ಸುಗಳಿಗೆ ಸಂಬಂಧಿಸಿದಂತೆ, ಆಯಾ ವಿಶ್ವವಿದ್ಯಾಲಯಗಳ ಅಧಿನಿಯಮದನ್ವಯ ಒಟ್ಟಾರೆ ಪ್ರವೇಶಾತಿಯ ಪೈಕಿ ಇಂತಿಷ್ಟು ಶೇಕಡ ಪ್ರಮಾಣದ ಸೀಟುಗಳು ಸರ್ಕಾರಿ ಸೀಟುಗಳಾಗಿರುತ್ತವೆ. ಈ ಶೇಕಡವಾರು ಪ್ರಮಾಣದ ಸಿಟುಗಳನ್ನು ಸರ್ಕಾರದ ವತಿಯಿಂದ ಭರ್ತಿ ಮಾಡಬೇಕು ಮತ್ತು ಬೋಧನಾ ಶುಲ್ಕವನ್ನು ನಿಗಧಿಪಡಿಸಬೇಕು. ಅದರಂತೆ, 2018-19 ನೇ ಸಾಲಿನ ಈ ಸೀಟುಗಳನ್ನು ಸರ್ಕಾರದ ವತಿಯಿಂದ ಹಂಚಿಕೆ ಮಾಡಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಸೀಟ್ ಮ್ಯಾಟ್ರಿಕ್ಸ್ ಮೂಲಕ ವಹಿಸಲಾಗಿದೆ. ಈ ಸೀಟುಗಳ 2018-19 ನೇ ಸಾಲಿನ ಪ್ರವೇಶಾತಿಗೆ ಸರ್ಕಾರವು ಬೋಧನಾ ಶುಲ್ಕವನ್ನು ನಿಗದಿಪಡಿಸುವ ನಿಟ್ಟಿನಲ್ಲಿ ಕ್ರಮವಹಿಸಲಾಗಿದ್ದು, ಹಿಂದಿನ ಮಾನ್ಯ ಉನ್ನತ ಶಿಕ್ಷಣ ಸಚಿವರು 2015-16 ನೇ ಸಾಲಿಗೆ ಸಂಬಂಧಿಸಿದಂತೆ ಈ ಕೆಳಕಂಡಂತೆ ಶುಲ್ಕವನ್ನು ನಿಗಧಿಪಡಿಸಲು ಅನುಮೋದಿಸಿದ್ದು, ಅದರಂತೆ ಕ್ರಮವಹಿಸಲಾಗಿರುತ್ತದೆ.

> ಯಾವ ಖಾಸಗಿ ವಿಶ್ವವಿದ್ಯಾಲಯಗಳು ಕಾಯ್ದೆಯಲ್ಲಿನ ಅವಕಾಶದನ್ವಯ ಶುಲ್ಕ ನಿಗದಿ ಸಮಿತಿಯನ್ನು ರಚಿಸಿಕೊಂಡು, ರೂ.50,000/- ಗಳಗಿಂತ ಹೆಚ್ಚಿನ ಶುಲ್ಕವನ್ನು ನಿಗದಿಗೊಳಿಸಿದ್ದಲ್ಲಿ ಅಂತಹ ಖಾಸಗಿ ವಿಶ್ವವಿದ್ಯಾಲಯಗಳ ಶುಲ್ಕವನ್ನು <u>ರೂ.50,000/- ಗಳಿಗೆ ಸೀಮಿತಗೊಳಿಸಲು</u> ಹಾಗೂ ಉಳಿದ ವಿಶ್ವವಿದ್ಯಾಲಯಗಳಲ್ಲಿ ಶುಲ್ಕವನ್ನು ರೂ.50,000/- ಗಳಿಗಿಂತ ಕಡಿಮೆ ನಿಗದಿಗೊಳಿಸಿದ್ದಲ್ಲಿ ಅಂತಹ ಖಾಸಗಿ ವಿಶ್ವವಿದ್ಯಾಲಯಗಳ ಶುಲ್ಕವನ್ನು <u>ರೂ.45,000/- ಗಳಿಗೆ ಸೀಮಿತಗೊಳಿಸುವುದು.</u>

2. ಮೇಲ್ಕಂಡಂತೆ ನಿಗದಿಪಡಿಸಿದ ಬೋಧನಾ ಶುಲ್ಕವು 2017-18 ನೇ ಸಾಲಿನವರೆಗೂ ಮುಂದುವರಿದ್ದು, ಇದನ್ನು 2018-19 ನೇ ಸಾಲಿಗೂ ಮುಂದುವರಿಸಿ ಮೇಲೆ ಓದಲಾದ ಕ್ರಮಸಂಖ್ಯೆ (2) ರಲ್ಲಿ ಆದೇಶ ಹೊರಡಿಸಲಾಗಿದೆ. ಮೇಲೆ ಓದಲಾದ ಕ್ರಮಸಂಖ್ಯೆ (4) ರ ಮನವಿಗಳಲ್ಲಿ ಖಾಸಗಿ ವೃತ್ತಿಪರ ಸಂಸ್ಥೆಗಳ ಬೋಧನಾ ಶುಲ್ಕವನ್ನು ಹೆಚ್ಚಿಸಿರುವಂತೆ ಖಾಸಗೀ ವಿಶ್ವವಿದ್ಯಾಲಯಗಳಲ್ಲಿನ ಸರ್ಕಾರಿ ಕೋಟಾದ ಸೀಟುಗಳಿಗೂ ಸಹ ಬೋಧನಾ ಶುಲ್ಕವನ್ನು ಹೆಚ್ಚಿಸುವಂತೆ ಸರ್ಕಾರಕ್ಕೆ ಮನವಿಗಳನ್ನು ಸಲ್ಲಿಸಲಾಗಿದೆ.

3. ಪ್ರಕರಣದಲ್ಲಿ ಒದಗಿಬಂದ ಸಂದರ್ಭ, ಸನ್ನಿವೇಶ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಈ ಹಿಂದೆ, ಖಾಸಗೀ ವೃತ್ತಿಪರ ಶಿಕ್ಷಣ ಸಂಸ್ಥೆಗಳ ಸರ್ಕಾರಿ ಕೋಟಾದ ಸೀಟುಗಳಿಗೆ ನಿಗದಿಪಡಿಸಿದ ಬೋಧನಾ ಶುಲ್ಕದ ದರವನ್ನು ಆಧರಿಸಿ, ಖಾಸಗೀ / ಡೀಮ್ಡ್ ವಿಶ್ವವಿದ್ಯಾಲಯಗಳ ಬೋಧನಾ ಶುಲ್ಕವನ್ನು ನಿಗಧಿಪಡಿಸಿರುವುದು ಕಂಡುಬರುತ್ತದೆ. ಆದಕಾರಣ, 2018-19 ನೇ ಸಾಲಿಗೂ ಸಹ ಇದೇ ಮಾನದಂಡವನ್ನು ಆಧರಿಸಿ, 2018-19 ನೇ ಸಾಲಿಗೆ ಖಾಸಗೀ ವೃತ್ತಿಪರ ಶಿಕ್ಷಣ ಸಂಸ್ಥೆಗಳ ಸರ್ಕಾರಿ ಕೋಟಾದ ಸೀಟುಗಳಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಆದೇಶದಲ್ಲಿ ನಿಗಧಿಪಡಿಸಿರುವ ಬೋಧನಾ ಶುಲ್ಕ ಮತ್ತು ಇತರೆ ಶುಲ್ಕಗಳ ದರಗಳ ಸರಾಸರಿ ಮೊತ್ತವನ್ನು 2018-19 ನೇ ಸಾಲಿಗೆ ಖಾಸಗೀ / ಡೀಮ್ಡ್ ವಿಶ್ವವಿದ್ಯಾಲಯಗಳ ಸರ್ಕಾರಿ ಕೋಟಾದ ಸೀಟುಗಳಿಗೆ ಬೋಧನಾ ಶುಲ್ಕವನ್ನಾಗಿ ನಿಗದಿಪಡಿಸುವುದು ಸೂಕ್ತವೆಂದು ಸರ್ಕಾರವು ನಿರ್ಣಯಿಸಿ, ಈ ಕೆಳಕಂಡಂತೆ ಆದೇಶಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ: ಇಡಿ 157 ಟಿಇಸಿ 2018 (ಭಾಗ)</u>
<u>ಬೆಂಗಳೂರು, ದಿನಾಂಕ: 26ನೇ ಜುಲೈ 2018.</u>

4. ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಖಾಸಗೀ / ಡೀಮ್ಡ್ ವಿಶ್ವವಿದ್ಯಾಲಯಗಳು ವಿಶ್ವವಿದ್ಯಾಲಯದ ಅಧಿನಿಯಮದಲ್ಲಿ ಉಲ್ಲೇಖಿಸಿರುವ ಸರ್ಕಾರಿ ಕೋಟಾದ ಶೇಕಡವಾರು ಪ್ರಮಾಣದ ಸೀಟುಗಳಿಗೆ 2018-19 ನೇ ಸಾಲಿಗೆ ಬೋಧನಾ ಶುಲ್ಕವಾಗಿ ರೂ. 56,430/- ಗಳನ್ನು ನಿಗದಿಪಡಿಸಿ, ಆದೇಶಿಸಿದೆ.

5. ಮೇಲೆ ನಿಗದಿಪಡಿಸಿದ ಬೋಧನಾ ಶುಲ್ಕವನ್ನು ಮಾತ್ರ ಎಲ್ಲಾ ವಿಶ್ವವಿದ್ಯಾಲಯಗಳು ಪಡೆಯತಕ್ಕದ್ದು.

6. ಪ್ರವೇಶಾತಿ ಪಡೆದ ವಿದ್ಯಾರ್ಥಿಗಳು ಕಾರಣಾಂತರಗಳಿಂದ ಒಂದು ವೇಳೆ ವಿದ್ಯಾಭ್ಯಾಸವನ್ನು ಮೊಟಕುಗೊಳಿಸಿದ್ದಲ್ಲಿ, ಸದರಿ ವಿದ್ಯಾರ್ಥಿಗಳು ಪ್ರವೇಶಾತಿ ಸಂದರ್ಭದಲ್ಲಿ ಸಂಸ್ಥೆಗೆ ಸಲ್ಲಿಸಲ್ಪಟ್ಟ ಮೂಲ ದಾಖಲೆಗಳನ್ನು ಮತ್ತು ಬೋಧನಾ ಶುಲ್ಕವನ್ನು ತಕ್ಷಣವೇ ಹಿಂದಿರುಗಿಸುವ ಬಗ್ಗೆ ಖಾಸಗೀ / ಡೀಮ್ಡ್ ಕ್ರಮವಹಿಸುವುದು. ಈ ಬಗ್ಗೆ ಕಾಲಕಾಲಕ್ಕೆ ಎಐಸಿಟಿಇ, ನವದೆಹಲಿ ಇವರು ಹೊರಡಿಸಿರುವ ಮಾರ್ಗಸೂಚಿ/ನಿಯಮಗಳನ್ನು ತಪ್ಪದೇ ಪಾಲಿಸುವುದು.

7. 2018-19ನೇ ಶೈಕ್ಷಣಿಕ ಸಾಲಿಗೆ ವೃತ್ತಿಪರ ಇಂಜಿನಿಯರಿಂಗ್/ಆರ್ಕಿಟೆಕ್ಚರ್ ಕೋರ್ಸುಗಳಿಗೆ ಮೇಲ್ಕಂಡಂತೆ ಪ್ರವೇಶಾತಿ ಪ್ರಕ್ರಿಯೆ ಮತ್ತು ಶುಲ್ಕ ನಿಗದಿಯು ಈ ಆದೇಶದನ್ವಯವೇ ಅನುಷ್ಠಾನದ ಕ್ರಮ ಜರುಗಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

S. Venkatesh

(ಎಸ್.ವೆಂಕಟೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ).

<u>ಗೆ:</u>

· ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ರವರು ಕಳುಹಿಸಿ ಇದನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ ಸರ್ಕಾರಕ್ಕೆ 100 ಪ್ರತಿಗಳನ್ನು ಕಳುಹಿಸಲು ಕೋರಿದೆ.

ಪ್ರತಿ:

1. ಕುಲಪತಿಗಳು, ವಿಶ್ವೇಶ್ವರಾಯ ತಾಂತ್ರಿಕ ವಿಶ್ವವಿದ್ಯಾಲಯ, ಜ್ಞಾನಗಂಗೋತ್ರಿ, ಬೆಳಗಾಂ./ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು.
2. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.
3. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಸರ್ಕಾರದ ಉಪ ಕಾರ್ಯದರ್ಶಿ, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ, ವಿಧಾನಸೌಧ, ಬೆಂಗಳೂರು.
5. ಎಲ್ಲಾ ಖಾಸಗೀ / ಡೀಮ್ಡ್ ವಿಶ್ವವಿದ್ಯಾಲಯಗಳ ಕುಲಸಚಿವರುಗಳಿಗೆ.
6. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ) ರವರ ಆಪ್ತ ಕಾರ್ಯದರ್ಶಿ.
8. ಸರ್ಕಾರದ ಉಪ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯ) ರವರ ಆಪ್ತ ಸಹಾಯಕರು.
9. ಪತ್ರಿಕಾ ಮೇಜು.
10. ಮಾಹಿತಿ ಕೇಂದ್ರ, ಶಿಕ್ಷಣ ಇಲಾಖೆ (ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕೋರಿದೆ)
11. ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿ.